ಹೊಸ ಬಡಾವಣೆ ನಿರ್ಮಾಣ

953 (219) ಶ್ರೀ ಗೂಳಿಹಟ್ಟಿ ಡಿ. ಶೇಖರ (ಹೊಸದುರ್ಗ) : ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ಕೆಳಕಂಡ ಪ್ರಶ್ನೆಗೆ ದಯವಿಟ್ಟು ಉತ್ತರಿಸುವರೆ?

ಅ) ಪುರಸಭೆ, ನಗರಸಭೆ ವ್ಯಾಪ್ತಿಯಲ್ಲಿ ಹೊಸ ಬಡಾವಣೆಗಳ ನಿರ್ಮಿಸಿರುವ ಸಂದರ್ಭದಲ್ಲಿ ಮೀಸಲಿರಿಸಿದ ನಿವೇಶನಗಳನ್ನು ಲೇಔಟ್ ನಿರ್ಮಾಣ ಮಾಡುವ ಸಂಸ್ಥೆಗೆ ನೀಡುವ ಬದಲು ಸಾರ್ವಜನಿಕ ಹರಾಜು ಮುಖಾಂತರ ವಿಲೇವಾರುಗೊಳಿಸಲು ಇರುವ ಸಮಸ್ಯೆ ಏನು?

ಶ್ರೀ ಬಾಲಚಂದ್ರ ಲಕ್ಷ್ಮಣರಾವ್ ಜಾರಕಿಹೊಳಿ (ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು) :

ಅ) ರಾಜ್ಯದ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಹೊಸ ಬಡಾವಣೆ ಗಳನ್ನು ನಿರ್ಮಿಸುವ ಸಂದರ್ಭದಲ್ಲಿ ಸಾರ್ವಜನಿಕ ಉದ್ದೇಶಗಳಿಗೆ ಮೀಸಲಿರಿಸಿದ ನಿವೇಶನಗಳನ್ನು ಬಡಾವಣೆಗಳ ನಿರ್ಮಾಣದ ನಂತರ ಸ್ಥಳೀಯ ಸಂಸ್ಥೆಗೆ ಹಸ್ತಾಂತರಿಸಬೇಕಾಗುತ್ತದೆ. ಆದಕಾರಣ ಲೇಔಟ್ ನಿರ್ಮಾಣ ಮಾಡುವ ಸಂಸ್ಥೆಗೆ ನಿವೇಶನ ನೀಡುವ ಪ್ರಶ್ನೆ ಉದ್ಭವಿಸುವುದಿಲ್ಲ. ಎಲ್ಲಾ ನಗರ ಮತ್ತು ಪಟ್ಟಣಗಳ ಸುವ್ಯವಸ್ಥಿತ ಬೆಳವಣಿಗೆಗೆ ಹಾಗೂ ಸಾರ್ವಜನಿಕರ ಹಿತದೃಷ್ಟಿಯಿಂದ ಉದ್ಯಾನವನ ಮತ್ತು ಬಯಲು ಜಾಗಕ್ಕೆ ಮೀಸಲಿಟ್ಟ ಪ್ರದೇಶಗಳನ್ನು ಇತರ ಉದ್ದೇಶಕ್ಕೆ ಪರಿವರ್ತಿಸುವುದಕ್ಕೆ ಉತ್ತೇಜನ ನೀಡಬಾರದೆಂದು ಕಟ್ಟುನಿಟ್ಟಾದ ನಿರ್ದೇಶನ ನೀಡಿದೆ. ತಪ್ಪಿದಲ್ಲಿ ಸಂಬಂಧಪಟ್ಟ ಅಧಿಕಾರಿಗಳನ್ನು ಜವಾಬ್ದಾರರನ್ನಾಗಿ ಮಾಡಿ ಶಿಸ್ತಿನ ಕ್ರಮವನ್ನು ಜರುಗಿಸಲಾ ಗುವುದೆಂದು ಸ್ಪಷ್ಟಪಡಿಸಿದೆ.

ಸೇತುವೆಯ ಮರು ನಿರ್ಮಾಣ

954 (912) ಶ್ರೀ ಗೋಪಾಲಕೃಷ್ಣ ಬೇಳೂರು (ಸಾಗರ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗೆ ದಯವಿಟ್ಟು ಉತ್ತರಿಸುವರೆ?

ಅ) ಸಾಗರ ತಾಲ್ಲೂಕಿನ ಕೋಗಾರ್ ಹತ್ತಿರ ಎಣ್ಣೆಹೊಳೆ ಸೇತುವೆ ಮರುನಿರ್ಮಾಣಕ್ಕೆ ಇಲಾಖೆಯು ತೆಗೆದುಕೊಂಡ ಕ್ರಮವೇನು?

ಶ್ರೀ ಸಿ.ಎಂ. ಉದಾಸಿ (ಲೋಕೋಪಯೋಗಿ ಸಚಿವರು) :

ಅ) ಲೋಕೋಪಯೋಗಿ ಇಲಾಖೆಯ ಶಿವಮೊಗ್ಗ ವಿಭಾಗಕ್ಕೆ ಸಂಬಂಧಿಸಿದಂತೆ ಸಾಗರ ತಾಲ್ಲೂಕಿನ ಕೋಗಾರ್-ಹಿರೇಭಾಸ್ಕರ್ ಬದಲಿ ರಸ್ತೆ (ಜಿಲ್ಲಾ ಮುಖ್ಯ ರಸ್ತೆ) ಕಿ.ಮೀ. 66.60 ರಲ್ಲಿ ಇರುವ ಎಣ್ಣೆಹೊಳೆ ಸೇತುವೆಯು 1940ನೇ ವರ್ಷಕ್ಕಿಂತಲೂ ಪೂರ್ವದಲ್ಲಿ ನಿರ್ಮಾಣ ಗೊಂಡಿದ್ದು, 2011ನೇ ಸಾಲಿನಲ್ಲಿ ಸದರಿ ಪ್ರದೇಶದಲ್ಲಿ ಬಿದ್ದ ಭಾರಿ ಮಳೆಯಿಂದಾಗಿ ಸದರಿ ಸೇತುವೆಯು ಕುಸಿದಿರುತ್ತದೆ.

ಸದರಿ ಸ್ಥಳದಲ್ಲಿ ಸಾರ್ವಜನಿಕರ ಮತ್ತು ದ್ವಿಚಕ್ರ ವಾಹನ ಸಂಚಾರದ ಅನುಕೂಲಕ್ಕಾಗಿ ತಾತ್ಕಾಲಿಕವಾಗಿ ಪೈಪುಗಳನ್ನು ಅಳವಡಿಸಿ ಬದಲಿ ರಸ್ತೆ ನಿರ್ಮಿಸಲಾಗಿದೆ.

ಸದರಿ ಸೇತುವೆಯ ಪುನರ್ ನಿರ್ಮಾಣ ಕಾಮಗಾರಿಯನ್ನು ಜರೂರಾಗಿ ಕೈಗೊಳ್ಳಬೇಕಾಗಿದ್ದು, ರೂ.130.00 ಲಕ್ಷಗಳ ಮೊತ್ತದಲ್ಲಿ ಪ್ರಸ್ತಾವನೆಯನ್ನು 2011-12ನೇ ಸಾಲಿನ ಆಯವ್ಯಯ ಅಪೆಂಡಿಕ್ಸ್-ಇ ನಲ್ಲಿ ಸೇರ್ಪಡೆ ಗೊಳಿಸಲು ಪರಿಶೀಲಿಸಲಾಗುತ್ತಿದ್ದು, ಅನುದಾನದ ಲಭ್ಯತೆಯನ್ನಾಧರಿಸಿ ಈ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದು.

ಕುಡಿಯುವ ನೀರಿನ ಪೂರೈಕೆ

955 (913) ಶ್ರೀ ಗೋಪಾಲಕೃಷ್ಣ ಬೇಳೂರು (ಸಾಗರ) : ಮಾನ್ಯ ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರ ಸಚಿವರು ಈ ಕೆಳಕಂಡ ಪ್ರಶ್ನೆಗೆ ದಯವಿಟ್ಟು ಉತ್ತರಿಸುವರೆ?

ಅ) ಸಾಗರ ಪಟ್ಟಣವು 6000 ಜನಸಂಖ್ಯೆಯನ್ನು ಹೊಂದಿದ್ದು, ಕುಡಿಯುವ ನೀರಿನ ವ್ಯವಸ್ಥೆಗಾಗಿ ಲಿಂಗನಮಕ್ಕಿ-ಶರಾವತಿ ನದಿಯಿಂದ ಸಂಪರ್ಕಿಸುವ ಯೋಜನೆಗೆ ಅನುಮೋದನೆ ದೊರೆತಿರುತ್ತದೆ. ಈ ಯೋಜನೆಯ ಒಟ್ಟು ಮೊತ್ತವೆಷ್ಟು; ಈ ಯೋಜನೆಯು ಯಾವ ಹಂತದಲ್ಲಿದೆ; ಕಾಮಗಾರಿಯನ್ನು ಸಂಪೂರ್ಣಗೊಳಿಸಲು ಕಾಲಮಿತಿ ನಿಗದಿಗೊಳಿಸಲಾಗಿದೆಯೇ? (ವಿವರ ನೀಡುವುದು)